**Bangalore**
**Regional News**
**03.09.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

1. ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಿಂದ ಬೆಂಗಳೂರಿನ ಕಸ ವಿಲೇವಾರಿ, ನೀರು ಸರಬರಾಜು ಸೇರಿ ಅನೇಕ ಸಮಸ್ಯೆಗೆ ಶೀಘ್ರ ಪರಿಹಾರ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
2. ಭದ್ರಾವತಿ ಉಕ್ಕು ಕಾರ್ಖಾನೆಯ ಪುನಶ್ಚೇತನ ಕಾರ್ಯ ಪ್ರಗತಿಯಲ್ಲಿ - ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ
3. ಬೆಂಗಳೂರು-ಮೈಸೂರು ಮೂಲಸೌಕರ್ಯ ಕಾರಿಡಾರ್ ಯೋಜನೆ: ಪ್ರಸ್ತುತ ೪೧ ಕಿಲೋ ಮೀಟರ್ ಕಾಮಗಾರಿ ಪೂರ್ಣ
4. ಧರ್ಮಸ್ಥಳ ಪ್ರಕರಣ: ಆರೋಪಿ ಚಿನ್ನಯ್ಯ ಮತ್ತೆ ೪ ದಿನ ಎಸ್ಐಟಿ ವಶಕ್ಕೆ

<><><><>

ಭುವನೇಶ್ವರಿ ದೇವಿಗೆ ಪೂಜೆ ಸಲ್ಲಿಸಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ನಾಮಫಲಕವನ್ನು ಜಿಬಿಎ ಕೇಂದ್ರ ಕಚೇರಿಯಲ್ಲಿ ಇಂದು ಬೆಂಗಳೂರು ನಗರಾಭಿವೃದ್ಧಿ ಸಚಿವ ಹಾಗೂ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅನಾವರಣಗೊಳಿಸಿದ್ದಾರೆ. ಬಳಿಕ ಮಾತನಾಡಿದ ಅವರು, ಬೆಂಗಳೂರಿನ ಸಮಗ್ರ ಅಭಿವೃದ್ಧಿಯೇ ರಾಜ್ಯ ಸರ್ಕಾರದ ಗುರಿ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಿಂದ ಬೆಂಗಳೂರಿನ ಕಸ ವಿಲೇವಾರಿ, ನೀರು ಸರಬರಾಜು ಸೇರಿದಂತೆ ಅನೇಕ ಸಮಸ್ಯೆಗೆ ಶೀಘ್ರ ಪರಿಹಾರ ದೊರೆಯಲಿದೆ ಎಂದು ಆಶಿಸಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಎಲ್ಲಾ ನಾಗರಿಕರು ಸೂಕ್ತ ಸಮಯದಲ್ಲಿ ತೆರಿಗೆ ಪಾವತಿಸುವ ಮೂಲಕ ಅಭಿವೃದ್ಧಿ ಕಾರ್ಯಗಳಿಗೆ ಸಹಕರಿಸುವಂತೆ ಅವರು ಮನವಿ ಮಾಡಿದ್ದಾರೆ.

<><><><>

ಭದ್ರಾವತಿ ಉಕ್ಕು ಕಾರ್ಖಾನೆಯ ಪುನಶ್ಚೇತನ ಕಾರ್ಯ ಪ್ರಗತಿಯಲ್ಲಿದೆ ಎಂದು ಕೇಂದ್ರ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ನಡೆದ ಸಭೆಯಲ್ಲಿ ಈ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ. ಭದ್ರಾವತಿ ಉಕ್ಕು ಕಾರ್ಖಾನೆಯಲ್ಲಿ, ಹಂತ-ಹಂತದ ಆಧುನೀಕರಣ ಹಾಗೂ ಫೋರ್ಜಿಂಗ್ ಪ್ರಯೋಗಗಳ ಮೂಲಕ ಪುನರುಜ್ಜೀವನ ಕಾರ್ಯ ಪ್ರಾರಂಭವಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಹೆಚ್.ಡಿ.ಕುಮಾರಸ್ವಾಮಿ ಮಾಹಿತಿ ನೀಡಿದ್ದಾರೆ.

<><><>

ಬೆಂಗಳೂರು-ಮೈಸೂರು ಮೂಲಸೌಕರ್ಯ ಕಾರಿಡಾರ್ ಯೋಜನೆ ಸಂಬಂಧಿಸಿದಂತೆ ಇರುವ ನ್ಯೂನ್ಯತೆ ಸರಿಪಡಿಸಲು ಸಚಿವ ಸಂಪುಟದ ಉಪಸಮಿತಿಯಲ್ಲಿ ನಿರ್ಧರಿಸಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ವಿಧಾನಸೌಧದಲ್ಲಿಂದು ನಡೆದ ಸಚಿವ ಸಂಪುಟ ಉಪ ಸಮಿತಿ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯೋಜನೆಯಡಿ ಈಗಾಗಲೇ ಎ-ವಿಭಾಗದಲ್ಲಿ ೪೧ ಕಿಲೋ ಮೀಟರ್ ಕಾಮಗಾರಿ ಪೂರ್ಣಗೊಂಡಿದೆ. ಸಚಿವ ಸಂಪುಟ ಉಪ ಸಮಿತಿ ಮೂಲಕ ಯೋಜನೆಯನ್ನು ಪಾರದರ್ಶಕ ಹಾಗೂ ವ್ಯವಸ್ಥಿತಗೊಳಿಸುವ ನಿಟ್ಟಿನಲ್ಲಿ ಕೆಲಸ ಮಾಡಲಾಗುತ್ತಿದೆ ಎಂದರು. ನ್ಯಾಯಾಲಯಗಳಲ್ಲಿ ಯೋಜನೆಯ ಕಾಮಗಾರಿ ಕುರಿತು ದಾಖಲಾಗಿರುವ ತಕರಾರುಗಳನ್ನು ಸೂಕ್ತ ಕಾನೂನು ತಂಡದಿಂದ ಶೀಘ್ರವೇ ಪರಿಹರಿಸಲಾಗುವುದು ಎಂದು ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.

<><><>

ಧರ್ಮಸ್ಥಳ ವ್ಯಾಪ್ತಿಯಲ್ಲಿ ಹಲವಾರು ಶವಗಳನ್ನು ಹೂತುಹಾಕಲಾಗಿದೆ ಎಂಬ ಪ್ರಕರಣದ ದೂರುದಾರ ಆರೋಪಿ ಚಿನ್ನಯ್ಯನನ್ನು ಇಂದು ವಿಶೇಷ ತನಿಖಾ ದಳ ಬೆಳ್ತಂಗಡಿಯ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, ನ್ಯಾಯಾಲಯ ಆರೋಪಿಯನ್ನು ಮತ್ತೆ ೪ ದಿನ ಎಸ್ಐಟಿ ವಶಕ್ಕೆ ಒಪ್ಪಿಸಿದೆ. ಆರೋಪಿಯನ್ನು ಬೆಳಗ್ಗೆ ಬೆಳ್ತಂಗಡಿಯ ಸರಕಾರಿ ಆಸ್ಪತ್ರೆಯಲ್ಲಿ ವೈದ್ಯಕೀಯ ತಪಾಸಣೆಗೊಳಪಡಿಸಲಾಗಿದ್ದು, ಇಂದು ಮಧ್ಯಾಹ್ನ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಚಿನ್ನಯ್ಯನನ್ನು ಬಂಧಿಸಿದ ಬಳಿಕ ವಶಕ್ಕೆ ಪಡೆದಿದ್ದ ಎಸ್ಐಟಿ ತಂಡ ಆತನನ್ನು ತೀವ್ರ ವಿಚಾರಣೆಗೊಳಪಡಿಸಿ, ಸಾಕಷ್ಟು ಮಾಹಿತಿ ಕಲೆ ಹಾಕಿತ್ತು. ಇಂದು ಆತನ ಕಸ್ಟಡಿ ಅವಧಿ ಮುಕ್ತಾಯವಾಗುತ್ತಿರುವುದರಿಂದ ಆತನನ್ನು ಎಸ್ಐಟಿ ಅಧಿಕಾರಿಗಳು ನ್ಯಾಯಾಲಯದ ಮುಂದೆ ಹಾಜರು ಪಡಿಸಿದ್ದರು. ಸಾಕ್ಷಿ ದೂರುದಾರನಾಗಿ ಬಂದಿದ್ದ ಚಿನ್ನಯ್ಯನನ್ನು ಆಗಸ್ಟ್ ೨೩ ರಂದು ಎಸ್ಐಟಿ ತಂಡ, ಆತ ತಂದಿದ್ದ ತಲೆಬುರುಡೆಯ ವಿಚಾರದಲ್ಲಿ ಬಂಧಿಸಿತ್ತು.

<><><>

ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಉಡಮಕಲ್ಲ ಗ್ರಾಮದಲ್ಲಿ ಇಂದು ಕೇಂದ್ರ ಸರ್ಕಾರದ ಆರ್ಥಿಕ ಸಾಕ್ಷರತೆ ಕಾರ್ಯಕ್ರಮವನ್ನು ಕೊಪ್ಪಳ ಜಿಲ್ಲೆಯ ಮಾರ್ಗದರ್ಶಿ ಬ್ಯಾಂಕ್, ಭಾರತೀಯ ಸ್ಟೇಟ್ ಬ್ಯಾಂಕ್ ವ್ಯವಸ್ಥಾಪಕ ಮಾರುತಿ ಉದ್ಘಾಟಿಸಿದರು. ಸ್ವ-ಸಹಾಯ ಗುಂಪಿನ ಮಹಿಳೆಯರಿಗೆ ಪ್ರಧಾನ ಮಂತ್ರಿ ಜೀವನ್ ಬಿಮಾ ಜೀವನ ಜ್ಯೋತಿ ಜೀವನ ಸುರಕ್ಷಾ ಮತ್ತು ಅಟೇಲ ಬಿಹಾರಿ ವಾಜಪೇಯಿ ಪಿಂಚಣಿ ಯೋಜನೆಯ ಬಗ್ಗೆ ಮಾಹಿತಿ ನೀಡಿದರು.

ಧ್ವನಿ: ಮಾರುತಿ, ಭಾರತೀಯ ಸ್ಟೇಟ್ ಬ್ಯಾಂಕ್ ವ್ಯವಸ್ಥಾಪಕ

<><><>

ರಾಜ್ಯ ಸರ್ಕಾರ ಜಾರಿ ಮಾಡಿರುವ ಪಂಚ ಗ್ಯಾರಂಟಿ ಯೋಜನೆಗಳ ಕಾರಣದಿಂದಾಗಿ ದೇಶದಲ್ಲಿ ಕರ್ನಾಟಕ ರಾಜ್ಯ ತಲಾದಾಯದಲ್ಲಿ ಮೊದಲನೇ ಸ್ಥಾನದಲಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ಎಂ.ರೇವಣ್ಣ ಅಭಿಪ್ರಾಯಪಟ್ಟಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ಇಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಹಮ್ಮಿಕೊಂಡಿದ್ದ ಗ್ಯಾರಂಟಿ ಯೋಜನೆಗಳ ಕುರಿತ ರಾಜ್ಯಮಟ್ಟದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಇಡೀ ದೇಶದಲ್ಲಿ ಅತಿ ಹೆಚ್ಚು ಜಿಎಸ್‌ಟಿ ಸಂಗ್ರಹಿಸುವ ರಾಜ್ಯ, ಕರ್ನಾಟಕವಾಗಿದೆ. ಈ ಎಲ್ಲಾ ಸಾಧನೆಗೆ ಪಂಚ ಗ್ಯಾರಂಟಿ ಯೋಜನೆಗಳಿಂದಾಗುತ್ತಿರುವ ಆರ್ಥಿಕ ಸಂಚಾರವೇ ಕಾರಣ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><><>

ಜಲಜೀವನ್ ಮಿಷನ್ ಯೋಜನೆಯ ಕಾಮಗಾರಿಗಳನ್ನು ಗುತ್ತಿಗೆದಾರರು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸದಿದ್ದರೆ, ಅವರಿಗೆ ದಂಡ ವಿಧಿಸುವಂತೆ ಉತ್ತರ ಕನ್ನಡ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಡಾ.ದಿಲಿಷ್ ಶಶಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕಾರವಾರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಿವಿಧ ಕಾರಣಗಳಿಂದ ವಿಳಂಬವಾಗಿರುವ ಬಗ್ಗೆ ಪರಿಶೀಲಿಸಿ ಮಾಹಿತಿ ಪಡೆದು, ಅಂತಹ ಕಾಮಗಾರಿಯನ್ನು ಪೂರ್ಣಗೊಳಿಸಲು ಕಾಲಾವಧಿ ನೀಡಲು ಅವಕಾಶವಿದ್ದಲ್ಲಿ ರಿಯಾಯಿತಿ ನೀಡಬೇಕು. ಇಲ್ಲವಾದಲ್ಲಿ ನ್ಯಾಯಾಲಯದಲ್ಲಿ ಇರುವ ಕಾಮಗಾರಿ ಹೊರತುಪಡಿಸಿ, ಇತರೆ ಕಾರಣಗಳಿಂದ ಕಾಮಗಾರಿ ಬಾಕಿ ಉಳಿಸಿರುವ ಗುತ್ತಿಗೆದಾರರಿಗೆ ದಂಡ ವಿಧಿಸುವಂತೆ ನಿರ್ದೇಶಿಸಿದರು. ವಿಳಂಬವಾಗಿರುವ ಮತ್ತು ಪ್ರಗತಿಯಲ್ಲಿರುವ ಜೆಜೆಎಂ ಕಾಮಗಾರಿಗಳನ್ನು ಪರಿಶೀಲಿಸಿ, ಈ ಬಗ್ಗೆ ವರದಿ ನೀಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಸೂಚಿಸಿದ್ದಾರೆ.

<><><>

ಜಲಜೀವನ್ ಮಿಷನ್ ಯೋಜನೆಯಡಿ ಕಾಮಗಾರಿಗಳನ್ನು ಪೂರ್ಣಗೊಳಿಸುವಲ್ಲಿ ವಿಳಂಬ ಮಾಡುವ ಗುತ್ತಿಗೆದಾರರಿಗೆ ದಂಡ ವಿಧಿಸುವಂತೆ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದ ಡಾ. ಸಿ.ಎನ್.ಮಂಜುನಾಥ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ಅವರಿಗೆ ಸೂಚನೆ ನೀಡಿದರು. ರಾಮನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಮಟ್ಟದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ-ದಿಶಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಲ್

ಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯ ೯೮೪ ಕಾಮಗಾರಿಗಳ ಪೈಕಿ ೨೫೨ ಯೋಜನೆಗಳನ್ನು ಹರ್ ಘರ್ ಜಲ್ ಯೋಜನೆಗಳು ಎಂದು ಘೋಷಿಸಲಾಗಿದೆ. ೪೭೫ ಕಾಮಗಾರಿಗಳು ಪ್ರಕ್ರಿಯೆಯಲ್ಲಿದ್ದು, ಬಾಕಿ ಕಾಮಗಾರಿಗಳನ್ನು ಆದಷ್ಟು ಶೀಘ್ರವಾಗಿ ಪೂರ್ಣಗೊಳಿಸಬೇಕು ಎಂದು ನಿರ್ದೇಶಿಸಿದರು. ಆರೋಗ್ಯ ಇಲಾಖೆಯಲ್ಲಿ ಸಾಕಷ್ಟು ವೈದ್ಯರ ಹುದ್ದೆಗಳು ಖಾಲಿ ಇದೆ. ಜಿಲ್ಲೆಯಲ್ಲಿ ಎನ್.ಎಚ್.ಎಂ. ಯೋಜನೆಯಡಿ ಅನಸ್ತೇಶಿಯ, ಆರ್ಥೋಪೆಡಿಕ್ ಇತರೆ ವಿಭಾಗಗಳಲ್ಲಿ ವೈದ್ಯರನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ನೇಮಕ ಮಾಡಿಕೊಂಡು, ಸಾರ್ವಜನಿಕರ ಸೇವೆಗೆ ನಿಯೋಜಿಸುವಂತೆ ಸಂಸದ ಡಾ. ಸಿ.ಎನ್.ಮಂಜುನಾಥ್ ಸೂಚಿಸಿದರು.

<><><><>

<u>ಇನ್ನು ಹವಾವರ್ತಮಾನ,</u>

ಇಂದು ರಾಜ್ಯದ ಕರಾವಳಿ ಮತ್ತು ಉತ್ತರ ಮತ್ತು ದಕ್ಷಿಣ ಒಳನಾಡಿನಲ್ಲಿ ವ್ಯಾಪಕ ಮಳೆಯಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯ ಸೂಳ್ಯದಲ್ಲಿ ೧೧, ಮಂಕಿಯಲ್ಲಿ ೮, ಕಮ್ಮರಡಿ ೬ ಸೆಂಟಿ ಮೀಟರ್ ಮಳೆಯಾಗಿದೆ. ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತ ಉಂಟಾಗಿದ್ದು, ಇದರ ಪ್ರಭಾವದಿಂದ ಇಂದಿನಿಂದ ಇದೇ ೫ರವರೆಗೆ ಕರಾವಳಿ ಜಿಲ್ಲೆಗಳಲ್ಲಿ ವ್ಯಾಪಾಕ ಮಳೆಯಾಗಲಿದೆ ಹಾಗೂ ಇದೇ ೬ರಿಂದ ೯ರವರೆಗೆ ಸಾಧಾರಣ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆಯ ಬೆಂಗಳೂರು ಕೇಂದ್ರ ನಿರ್ದೇಶಕರಾದ ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ.

ಧ್ವನಿ : ಸಿ.ಎಸ್. ಪಾಟೀಲ್

<><><><>

ಇದೇ ೬ರಂದು ಬೆಳಗಾವಿಯಲ್ಲಿ ಜರಗುಲಿರುವ ಸಾರ್ವಜನಿಕ ಪ್ರತಿಷ್ಠಾನದ ಗಣೇಶ  ಮೂರ್ತಿಗಳ ಮೆರವಣಿಗೆ ಮತ್ತು ವಿಸರ್ಜನೆಗೆ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ ಎಂದು ಬೆಳಗಾವಿ ನಗರ ಪೊಲೀಸ್ ಆಯುಕ್ತ ಭೂಷಣ ಬೋರಸೆ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿಯಮಗಳನ್ನು ಪಾಲಿಸಿ, ಶಾಂತಿಯುತ ಗಣೇಶ ವಿಸರ್ಜನೆಗೆ ಸಹಕರಿಸಬೇಕೆಂದು ನಾಗರಿಕರಲ್ಲಿ ಮನವಿ ಮಾಡಿದರು. ಗಣೇಶ ವಿಸರ್ಜನೆಯ ಸಂದರ್ಭದಲ್ಲಿ ಒಬ್ಬ ಐಜಿಪಿ, ೭ ಎಸ್‌ಪಿ, ೨೫ ಡಿಎಸ್‌ಪಿ, ೮೭ ಇನ್ಸ್‌ಪೆಕ್ಟರ್, ೨೫೦ ಪಿಎಸ್‌ಐ, ಎಎಸ್‌ಐ ಸೇರಿದಂತೆ ಹೆಚ್ಚುವರಿ ಅಧಿಕಾರಿಗಳನ್ನು ನಿಯೋಜಿಸಲಾಗುವುದು. ೧೭ ಕಡೆ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ.  ಮೆರವಣಿಗೆ ಸಂದರ್ಭದಲ್ಲಿ ಪಟಾಕಿ ಸಿಡಿಸಲು ಅವಕಾಶ ಇಲ್ಲ ಎಂದು ಅವರು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>